**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ-330 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಪ್ರಶ್ನೆಗೆ ಉತ್ತರ.**

**ವಿಷಯ:**

ಸಿ.ಟಿ.ಇ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯು ಡಯಟ್, ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷೆಯ ಶೈಕ್ಷಣಿಕ ವ್ಯವಸ್ಥೆಯ ಚಟುವಟಿಕೆಗಳನ್ನು ಪೂರ್ವ ಪ್ರಾಥಮಿಕ ಹಂತದಿಂದ ಪ್ರೌಢ ಶಾಲಾ ಹಂತದವರೆಗೆ ಎಲ್ಲಾ ಸ್ತರಗಳಲ್ಲಿಯೂ ಅನುಷ್ಠಾನಗೊಳಿಸುವ ಸಂಸ್ಥೆಯಾಗಿ, ಕ್ರಿಯಾಶೀಲತೆಯಿಂದ ದೀರ್ಘಕಾಲದಿಂದ ಕಾರ್ಯ ನಿರ್ವಹಿಸುತ್ತಿದೆ. ಒಟ್ಟಾರೆ ಇಲಾಖೆಯ ಶೇಕಡಾ 90 ರಷ್ಟು ಶೈಕ್ಷಣಿಕ ಚಟುವಟಿಕೆಗಳು ಇಲ್ಲಿಯೇ ನಿರ್ವಹಿಸಲ್ಪಡುತ್ತಿವೆ. ಶಿಕ್ಷಕರ ತರಬೇತಿ, ರಾಜ್ಯ ಮತ್ತು ಜಿಲ್ಲಾ ಮಟ್ಟದ ಕಾರ್ಯಾಗಾರಗಳು ನಿರಂತರವಾಗಿ ನಡೆಯುತ್ತಲೇ ಇರುತ್ತವೆ. ಎನ್.ಇ.ಪಿ-2020 ಅನುಷ್ಠಾನಗೊಳಿಸಲು ಪೂರ್ವ ಪ್ರಾಥಮಿಕ ಹಂತದಿಂದ 12ನೇ ತರಗತಿಯವರೆಗಿನ ಎಲ್ಲಾ ವಯೋಮಾನದ ಮಕ್ಕಳಿಗೆ ಮೌಲ್ಯಯುತವಾದ ಗುಣಾತ್ಮಕ ಶಿಕ್ಷಣದ ಮೇಲ್ವಿಚಾರಣೆಯನ್ನು ನಡೆಸುವ ಪರಿಶೀಲನಾ ಕಾರ್ಯವನ್ನು ಅರ್ಥಗರ್ಭಿತವಾಗಿ ಮಾಡುವಲ್ಲಿ ಡಯಟ್ ಕಾರ್ಯ ಅತ್ಯಾವಶ್ಯಕ. ಈ ಹುದ್ದೆಗಳನ್ನು ಸ್ಥಳಾಂತರ/ವರ್ಗಾವಣೆಗೊಳಿಸುವುದರಿಂದ, ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿಯುಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

—

**<u>ಉತ್ತರ :</u>**

ರಾಷ್ಟ್ರೀಯ ಶಿಕ್ಷಣ ನೀತಿ 2020 ಹಾಗೂ ಕೇಂದ್ರ ಸರ್ಕಾರದ 2023ರ ಆಯವ್ಯಯದಲ್ಲಿ ಪ್ರಸ್ತಾಪಿಸಿರುವಂತೆ ಶಾಲಾ ಶಿಕ್ಷಣದ ಗುಣಮಟ್ಟದ ಅಭಿವೃದ್ಧಿಯ ದೃಷ್ಟಿಯಿಂದ ಡಯಟ್‌ಗಳನ್ನು ಬಲಪಡಿಸಲು ನಿರ್ಧರಿಸಲಾಗಿದೆ. ಈ ನಿಟ್ಟಿನಲ್ಲಿ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ರವರ ಅಧ್ಯಕ್ಷತೆಯಲ್ಲಿ ಇಲಾಖಾ ಅಧಿಕಾರಿಗಳು ಮತ್ತು ಶಿಕ್ಷಣ ತಜ್ಞರನ್ನೊಳಗೊಂಡ ಸಮಿತಿ ರಚಿಸಲು ಹಾಗೂ ಸಮಿತಿಯು ಆಯ್ದ ಕೆಲವು ರಾಜ್ಯಗಳ ಭೇಟಿ ಕೈಗೊಂಡು, ಆ ರಾಜ್ಯಗಳಲ್ಲಿ ಡಯಟ್‌ಗಳ ಕಾರ್ಯನಿರ್ವಹಣೆಯನ್ನು ಅಧ್ಯಯನ ಮಾಡಲು ಸೂಚಿಸಲಾಗಿದೆ. ಸಮಿತಿಯು ಸೂಕ್ತ ಅಧ್ಯಯನದ ಮೂಲಕ ಡಯಟ್‌ಗಳೂ ಸೇರಿದಂತೆ ಶೈಕ್ಷಣಿಕ ಗುಣಮಟ್ಟಕ್ಕೆ ಕಾರ್ಯನಿರ್ವಹಿಸುವ ಇತರೆ ಸಂಸ್ಥೆಗಳಾದ ಎಸ್.ಎಸ್.ಕೆ., ಡಿ.ಎಸ್.ಇ.ಆರ್.ಟಿ., ಸಿ.ಟಿ.ಇ., ಬಿ.ಆರ್.ಸಿ., ಸಿ.ಆರ್.ಸಿ.,ಗಳ ಕಾರ್ಯನಿರ್ವಹಣೆಯನ್ನು ಉತ್ತಮಪಡಿಸಲು ಅಗತ್ಯ ವರದಿಯನ್ನು ಪಡೆದು, ಮುಂದಿನ ಕ್ರಮ ಜರುಗಿಸಲು ನಿರ್ಧರಿಸಲಾಗಿದೆ.

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು

ಸಂಖ್ಯೆ: ಇಪಿ 17 ಪಿಟಿಐ 2023